ಇ) ಕೃಷಿ ವಲಯದ ಕೊಡುಗೆಯು 2005–06 ರಲ್ಲಿ ಶೇ. 19.55 ರಷ್ಟಿದ್ದು 2008–09 ರಲ್ಲಿ ಶೇ. 15.87 ರಷ್ಟು ವ್ಯತ್ಯಾಸವಾಗಿದೆ. ಪ್ರಸ್ತುತ ವರ್ಷದಲ್ಲಿ ಕೃಷಿ ವಲಯದ ಕೊಡುಗೆಯು ಶೇ. 15.94 ರಷ್ಟಿದೆ.

ಈ) ಯಾವುದೇ ಆರ್ಥಿಕ ಅಭಿವೃದ್ಧಿ ಹೊಂದುತ್ತಿರುವ ರಾಜ್ಯಗಳಲ್ಲಿ ಸೇವಾ ವಲಯದ ಒಟ್ಟು ಮತ್ತು ನಿವ್ವಳ ಮೌಲ್ಯವು ಹಾಗೂ ಅದರ ವಾರ್ಷಿಕ ಬೆಳವಣಿಗೆಯ ರಾಜ್ಯದ ಒಟ್ಟು ಆಂತರಿಕ ಉತ್ಪನ್ನದಲ್ಲಿ ತುಲನಾತ್ಮಕವಾಗಿ ಹೆಚ್ಚು ಇರುತ್ತದೆ. ಆದ್ದರಿಂದ ತುಲನಾತ್ಮಕವಾಗಿ ಕೃಷಿ ವಲಯದ ಕೊಡುಗೆಯು ಹಲವಾರು ವರ್ಷಗಳಿಂದ ಕಡಿಮೆಯಾಗುತ್ತಿದೆ.

ಅಂಗನವಾಡಿ ಕೇಂದ್ರದ ಸಿಬ್ಬಂದಿಗೆ ಸಂಬಳ

126 : (267)

ಶ್ರೀ ಯು.ಟಿ. ಖಾದರ್ (ಮಂಗಳೂರು)

ಅ) ಮಂಗಳೂರು ವಿಧಾನ ಸಭಾ ಕ್ಷೇತ್ರದ ಅಂಗನವಾಡಿ ಕೇಂದ್ರದಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗದವರಿಗೆ ಸರಿಯಾದ ಸಮಯಕ್ಕೆ ಸಂಬಳ ಪಾವತಿಯಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಅಂಗನವಾಡಿ ಕೇಂದ್ರದ ಸಿಬ್ಬಂದಿ ವರ್ಗದವರಿಗೆ ಸರಿಯಾದ ಸಮಯಕ್ಕೆ ಸಂಬಳ ಪಾವತಿಸಲು ಸರ್ಕಾರದ ಯಾವ ಕ್ರಮ ಕೈಗೊಂಡಿದೆ (ವಿವರ ನೀಡುವುದು)

ಇ) ಮಂಗಳೂರು ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿನ ಅಂಗನವಾಡಿ ಕೇಂದ್ರಗಳಿಗೆ ಶಾಶ್ವತ ಕಟ್ಟಡಗಳ ನಿರ್ಮಾಣಕ್ಕೆ ಅನುದಾನ ಒದಗಿಸಲಾಗುವುದೇ;

ಶ್ರೀ ಡಿ.ವಿ. ಸದಾನಂದಗೌಡ (ಮುಖ್ಯಮಂತ್ರಿಗಳು)

ಅ) ಮಂಗಳೂರು ವಿಧಾನ ಸಭಾ ಕ್ಷೇತ್ರದ ಅಂಗನವಾಡಿ ಕೇಂದ್ರದಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗದವರಿಗೆ ಸರಿಯಾದ ಸಮಯಕ್ಕೆ ಸಂಬಳ ಪಾವತಿಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಆ) ಅಂಗನವಾಡಿ ಕೇಂದ್ರದ ಸಿಬ್ಬಂದಿ ವರ್ಗದವರಿಗೆ ಸರಿಯಾದ ಸಮಯಕ್ಕೆ ಗೌರವಧನ ಪಾವತಿಸಲು ಪ್ರತಿ ತ್ರೈಮಾಸಿಕದ ಪ್ರಾರಂಭದಲ್ಲಿಯೇ ಅನುದಾನ ಬಿಡುಗಡೆ ಮಾಡುತ್ತಿರುವುದಲ್ಲದೆ, ಮಾರ್ಚ್ 2012 ರವರೆಗೆ ಅವಶ್ಯಕವಿದ್ದ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. ಅಂಗನವಾಡಿ ಕಾರ್ಯಕರ್ತೆ / ಅಂಗನವಾಡಿ ಸಹಾಯಕಿಯರ ಗೌರವಧನ ಪಾವತಿಸದೆ ಜಿಲ್ಲಾ ಕಚೇರಿಯ ಉಪ ನಿರ್ದೇಶಕರು / ನಿರೂಪಣಾಧಿಕಾರಿಗಳ ಹಾಗೂ / ಶಿಶು

ಅಭಿವೃದ್ಧಿ ಯೋಜನೆಯ ಅಧಿಕಾರಿ / ಸಿಬ್ಬಂದಿ ಸಂಬಳವನ್ನು ಪಾವತಿಸದಿರುವಂತೆ ಎಲ್ಲಾ ಜಿಲ್ಲಾ / ತಾಲ್ಲೂಕು ಖಜಾನೆಗಳಿಗೆ ನಿರ್ದೇಶನ ನೀಡಲು, ಖಜಾನಾ ನಿರ್ದೇಶಕರಿಗೆ ಪತ್ರ ಬರೆಯಲಾಗಿದೆ.

ಇ) ಮಂಗಳೂರು ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 218 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಈ ಪೈಕಿ 141 ಕೇಂದ್ರಗಳು ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆ. 9 ಕಟ್ಟಡಗಳು ನಿರ್ಮಾಣ ಹಂತದಲ್ಲಿವೆ. ಈ ಕಟ್ಟಡಗಳಿಗೆ ರೂ. 3.45 ಲಕ್ಷದಂತೆ ಒಟ್ಟು ರೂ. 31.05 ಲಕ್ಷ ಅನುದಾನ ಮಂಜೂರಾಗಿರುತ್ತದೆ. ಉಳಿದ ಕಟ್ಟಡಗಳಿಗೆ ಅನುದಾನ ಲಭ್ಯತೆ ಹಾಗೂ ನಿವೇಶನ ಲಭ್ಯತೆಗನುಗುಣವಾಗಿ ಹಂತಹಂತವಾಗಿ ಕಟ್ಟಡಗಳನ್ನು ನಿರ್ಮಿಸಲಾಗುವುದು.

ಅಂಗನವಾಡಿ ಕೇಂದ್ರಗಳ ವಿವರಗಳು

119 : (257)

ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ)

ಅ) ಬೀದರ್ ಜಿಲ್ಲೆಯಲ್ಲಿ ಎಷ್ಟು ಅಂಗನವಾಡಿ ಹಾಗೂ ಕಿರು ಅಂಗನವಾಡಿ ಕೇಂದ್ರಗಳಿವೆ (ವಿವರ ನೀಡುವುದು);

ಆ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ಜಿಲ್ಲೆಗೆ ಎಷ್ಟು ಅಂಗನವಾಡಿ ಕೇಂದ್ರಗಳು ಮಂಜೂರಾಗಿವೆ (ಮಾಹಿತಿ ನೀಡುವುದು);

ಇ) ಈ ಅಂಗನವಾಡಿ ಕೇಂದ್ರಗಳಿಗೆ ಎಷ್ಟು ಕಾರ್ಯಕರ್ತೆಯರ ಹಾಗೂ ಸಹಾಯಕಿಯರ ಹುದ್ದೆ ಭರ್ತಿ ಮಾಡಲಾಗಿದೆ; ಇನ್ನು ಎಷ್ಟು ಹುದ್ದೆ ಖಾಲಿ ಇವೆ (ವಿವರ ನೀಡುವುದು);

ಈ) ಕಾರ್ಯಕರ್ತೆಯರ ಹಾಗೂ ಸಹಾಯಕಿಯರ ಹುದ್ದೆಯನ್ನು ಭರ್ತಿ ಮಾಡದೇ, ಹಾಗೂ ಅಂಗನವಾಡಿ ಕೇಂದ್ರಗಳನ್ನು ಪ್ರಾರಂಭಿಸದೇ ಅನುದಾನವನ್ನು ದುರ್ಬಳಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಬಂದಿದ್ದಲ್ಲಿ, ದುರ್ಬಳಕೆ ಮಾಡುತ್ತಿರುವವರ ವಿರುದ್ಧ ಸರ್ಕಾರ ಏನು ಕ್ರಮ ಕೈಗೊಳ್ಳಲಿದೆ ?

ಶ್ರೀ ಡಿ.ವಿ. ಸದಾನಂದಗೌಡ (ಮುಖ್ಯಮಂತ್ರಿ)

ಅ) ಬೀದರ್ ಜಿಲ್ಲೆಯಲ್ಲಿ 1863 ಅಂಗನವಾಡಿ ಹಾಗೂ 27 ಕಿರು ಅಂಗನವಾಡಿ ಕೇಂದ್ರಗಳಿವೆ. ವಿವರ ಅನುಬಂಧ–1 ರಲ್ಲಿ ಒದಗಿಸಲಾಗಿದೆ.